ಸಕ್ಕರೆ ಕಾರ್ಖಾನೆಗಳ ಪುನರುಜ್ಜೀವನಕ್ಕಾಗಿ ತಜ್ಞರ ಸಮಿತಿ ನೇಮಿಸಿರುವ ಬಗ್ಗೆ.

೧೯೦೪. ಶ್ರೀ ಶ್ರೀರಂಗದೇವರಾಯಲು (ಕನಕಗಿರಿ).— ಮಾನ್ಯ ವಾಣಿಜ್ಯ, ಕೈಗಾರಿಕಾ ಮತ್ತು ವಿದ್ಯುಚ್ಛಕ್ತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ;

ಅ) ರಾಜ್ಯ ಸರ್ಕಾರ ಸಕ್ಕರೆ ಕಾರ್ಖಾನೆಗಳ ಪುನರುಜ್ಜೀವನಕ್ಕಾಗಿ ತಜ್ಞರ ಸಮಿತಿಯೊಂದನ್ನು ನೇಮಿಸಿದ್ದು ನಿಜವಲ್ಲವೇ ?

ಆ) ಹಾಗಿದ್ದಲ್ಲಿ, ಆ ಸಮಿತಿಯು ವರದಿಯನ್ನು ಇವಂವರೆಗೆ ಬಿಡುಗಡೆ ಮಾಡದಿರಲು ಕಾರಣ ವೇನು ?

ಇ) ಈಗಲಾದರೂ ಸರ್ಕಾರದವರು ಸದರಿ ವರದಿಯನ್ನು ತಕ್ಷಣ ಬಿಡುಗಡೆ ಮಾಡಿ ಸದನದ ಮುಂದಿಡುವರೆ ?

ಶ್ರೀ ಜೆ. ಹೆಚ್. ಪಟೇಲ್ (ಕೈಗಾರಿಕಾ ಮತ್ತು ವಿದ್ಯುಚ್ಛಕ್ತಿ ಮಂತ್ರಿಗಳು).—

ಅ) ಕೈಗಾರಿಕಾ ಮತ್ತು ವಿದ್ಯುಚ್ಛಕ್ತಿ ಮಂತ್ರಿಗಳವರ ಅಧ್ಯಕ್ಷತೆಯಲ್ಲಿ ಒಂದು ಸಮಿತಿಯನು ರಚಿಸಲಾಗಿದೆ.

ಆ) ಮತ್ತು ಇ) ಅಂತಿಮ ವರದಿಯು ಇನ್ನೂ ಸಿದ್ಧವಾಗಿಲ್ಲ.

ಶ್ರೀ ಶ್ರೀರಂಗದೇವರಾಯಲು.— ಅಧ್ಯಕ್ಷರೆ, ಈ ಸಮಿತಿಗೆ ಲೋಕಲ್ ಆಗಿ ನೀವು ಯಾರನ್ನು ತೆಗೆದುಕೊಂಡಿದ್ದೀರಿ ?

ಶ್ರೀ ಜೆ. ಹೆಚ್. ಪಟೇಲ್.— ಮಾನ್ಯ ಸದಸ್ಯರು ಒಂದು ನಿರ್ದಿಷ್ಟ ಕಾರ್ಖಾನೆಯನ್ನು ಗಮನ ದಲ್ಲಿಟ್ಟುಕೊಂಡು ಕೇಳುತ್ತಿದ್ದಾರೆ. ಅದಾವುದೆಂಬುದನ್ನು ಹೇಳಿದರೆ ಉತ್ತರಿಸುತ್ತೇನೆ.

ಶ್ರೀ ಶ್ರೀರಂಗದೇವರಾಯಲು.— ಗಂಗಾವತಿ ಸಕ್ಕರೆ ಕಾರ್ಖಾನೆ.

ಶ್ರೀ ಜೆ. ಹೆಚ್. ಪಟೇಲ್.— ಈ ಸಮಿತಿಯು ರಾಜ್ಯದಲ್ಲಿರತಕ್ಕಂಥ ಸಕ್ಕರೆ ಕಾರ್ಖಾನೆಗಳ ಸ್ಥಿತಿ ಗತಿ ಬಗ್ಗೆ ಹಾಗೂ ಅದು ಸರಿಯಾಗಿ ನಡೆಯುತ್ತಿದೆಯೇ ಎಂಬುದನ್ನು ನೋಡುತ್ತದೆ. ಅದರಲ್ಲಿ ವಿಧಾನಸಭೆ ಮತ್ತು ಪರಿಷತ್ತಿನ ಸದಸ್ಯರಿದ್ದಾರೆ. ಗಂಗಾವತಿ ಸಕ್ಕರೆ ಕಾರ್ಖಾನೆ ಬಗ್ಗೆ ಮಾಹಿತಿಯನ್ನು ಮಾನ್ಯ ಸದಸ್ಯರು ಕೇಳಿದರೆ ನೀಡುತ್ತೇನೆ.

ಶ್ರೀ ಶ್ರೀರಂಗದೇವರಾಯಲು.— ಇದು ಅಲ್ಲಿಯ ಜನರಿಗೆ ಒಂದು ವರವಾಗುವುದರ ಬದಲು ಶಾಪವಾಗಿದೆ. ಅದರ ಬಗ್ಗೆ ಪೂರ್ಣ ಮಾಹಿತಿಯನ್ನು ನೀಡಬೇಕೆಂದು ಮಾನ್ಯ ಮಂತ್ರಿಗಳಲ್ಲಿ ವಿನಯ ಪೂರ್ವಕವಾಗಿ ಕೇಳಿಕೊಳ್ಳುತ್ತೇನೆ.

ಶ್ರೀ ಜೆ. ಹೆಚ್. ಪಟೇಲ್.— ಗಂಗಾವತಿ ಸಕ್ಕರೆ ಕಾರ್ಖಾನೆಯು ಕಾರಣಾಂತರದಿಂದ ಮೂರು ವರ್ಷಗಳಿಂದ ಕೆಲಸ ಮಾಡುತ್ತಿಲ್ಲ. ಅದು ರೋಗಗ್ರಸ್ತ ಕಾರ್ಖಾನೆ. ಅಲ್ಲಿ ನೀರು ಸರಬರಾಜು ಕೊರತೆ ಇತ್ತು. ಕೆಲವು ಕಾಲ ಅದು ಕೆಲಸ ಮಾಡುತ್ತಿರಲಿಲ್ಲ.

ಕರ್ನಾಟಕ ಕೈಮಗ್ಗ ನಿಗಮದ ಆಡಳಿತ ಕಛೇರಿಯ ಬಗ್ಗೆ.

೨೧೨೨. ಶ್ರೀ ಬಿ. ಲಕ್ಕಪ್ಪ (ಚಿಕ್ಕನಾಯಕನಹಳ್ಳಿ).— ಮಾನ್ಯ ಕೈಗಾರಿಕಾ ಮಂತ್ರಿ ವಿದ್ಯುಚ್ಛಕ್ತಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮದ ಆಡಳಿತ ಕಛೇರಿ, ಬೆಂಗಳೂರಿನ ಕರ್ನಾಟಕ ಸಹಕಾರಿ ಫೆಡರೇಷನ್ನಿನ ಕಟ್ಟಡದಲ್ಲಿ ನಡೆಯುತ್ತಿರುವುದು ನಿಜವಲ್ಲವೆ ?